## ಸಂಕ್ಷಿಪ್ತ ಸುದ್ದಿಗಳು

### ಬೆಟಗೇರಿಯಲ್ಲಿ ರಾಷ್ಟ್ರೀಯ ಕೈಮಗ್ಗ ದಿನಾಚರಣೆ

# ಕೈಮಗ್ಗ ಉಳಿವಿಗೆ ಬುನಕರ್ ಸಮ್ಮಾನ್ ಯೋಜನೆ ಜಾರಿಗೊಳಿಸಿ



**ವಿಜಯಸಾಕ್ಷಿ ಸುದ್ದಿ, ಗದಗ**

ನೇಕಾರರನ್ನು ಆರ್ಥಿಕವಾಗಿ ಸದೃಢಗೊಳಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರವು ರೈತರಿಗೆ ನೀಡುತ್ತಿರುವ ಕಿಸಾನ್ ಸಮ್ಮಾನ್ ಯೋಜನೆಯ ಮಾದರಿಯಲ್ಲಿ ನೇಕಾರರಿಗೂ ವಾರ್ಷಿಕ ₹೧೦ ಸಾವಿರ ಬುನಕರ್ ಸಮ್ಮಾನ್ ಯೋಜನೆ ಜಾರಿಗೊಳಿಸಬೇಕು ಎಂದು ಕರ್ನಾಟಕ ರಾಜ್ಯ ನೇಕಾರ ಸೇವಾ ಸಂಘದ ರಾಜ್ಯಾಧ್ಯಕ್ಷ ಶಿವಲಿಂಗ ಜಿ. ಟಿರಕಿ ಒತ್ತಾಯಿಸಿದರು.

ಕರ್ನಾಟಕ ರಾಜ್ಯ ನೇಕಾರ ಸೇವಾ ಸಂಘದ ಗದಗ ಜಿಲ್ಲಾ ಘಟಕದ ವತಿಯಿಂದ ಬೆಟಗೇರಿಯಲ್ಲಿ ಆಯೋಜಿಸಿದ್ದ ರಾಷ್ಟ್ರೀಯ ಕೈಮಗ್ಗ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ರಾಷ್ಟ್ರೀಯ ಕೈಮಗ್ಗ ದಿನಾಚರಣೆ ಕೇವಲ ಆಚರಣೆಗೆ ಸೀಮಿತವಾಗದೆ ನೇಕಾರರ ಬದುಕು ಹಾಗೂ ವೃತ್ತಿಯ ಉಳಿವಿಗೆ ಪೂರಕವಾಗಬೇಕು. ನೇಕಾರರು ತಮ್ಮ ಹಕ್ಕು ಹಾಗೂ ಸೌಲಭ್ಯಗಳಿಗಾಗಿ ಹೋರಾಟ ನಡೆಸಿ ಸರ್ಕಾರದ ಗಮನ ಸೆಳೆಯಬೇಕಾದ ಪರಿಸ್ಥಿತಿ ಇದೆ. ಕೈಮಗ್ಗ ಹಾಗೂ ನೇಕಾರರ ಸಂಸ್ಕೃತಿಯನ್ನು ಉಳಿಸಿ ಬೆಳೆಸುವುದು ಎಲ್ಲರ ಜವಾಬ್ದಾರಿಯಾಗಿದೆ ಎಂದರು.

ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಕಟ್ಟಕಡೆಯ ನೇಕಾರರಿಗೂ ಸರ್ಕಾರದ ಸೌಲಭ್ಯಗಳು ತಲುಪುವಂತೆ ಕ್ರಮ ಕೈಗೊಳ್ಳಬೇಕು. ದೇಶದ ವಿಮಾನ ನಿಲ್ದಾಣ, ರೈಲು ನಿಲ್ದಾಣ, ಬಸ್ ನಿಲ್ದಾಣ ಸೇರಿದಂತೆ ಜನಸಂದಣಿ ಇರುವ ಪ್ರಮುಖ ಸ್ಥಳಗಳಲ್ಲಿ ನೇಕಾರರ ಉತ್ಪನ್ನಗಳ ಮಾರಾಟ ಮಳಿಗೆಗಳನ್ನು ಸ್ಥಾಪಿಸಬೇಕು ಎಂದು ಆಗ್ರಹಿಸಿದರು.


ಸರ್ಕಾರದ ವಿವಿಧ ಇಲಾಖೆಗಳು ಹಾಗೂ ಸಂಘ-ಸಂಸ್ಥೆಗಳು ಆಯೋಜಿಸುವ ಕಾರ್ಯಕ್ರಮಗಳಲ್ಲಿ ನೇಕಾರರಿಂದ ಸೀರೆ, ವಸ್ತ್ರ ಹಾಗೂ ಇತರ ಕೈಮಗ್ಗ ಉತ್ಪನ್ನಗಳನ್ನು ಖರೀದಿಸಿ ಬಳಸುವ ಮೂಲಕ ನೇಕಾರರಿಗೆ ಮಾರುಕಟ್ಟೆ ಕಲ್ಪಿಸಬೇಕು. ಇದರಿಂದ ನೇಕಾರರು ಆರ್ಥಿಕವಾಗಿ ಸ್ವಾವಲಂಬಿಗಳಾಗಲು ಸಾಧ್ಯ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಹಲವು ವರ್ಷಗಳಿಂದ ನೇಕಾರಿಕೆ ವೃತ್ತಿಯಲ್ಲಿ ಸೇವೆ ಸಲ್ಲಿಸುತ್ತಿರುವ ಹಿರಿಯ ನೇಕಾರ ಶ್ರಮಜೀವಿಗಳನ್ನು ಸನ್ಮಾನಿಸಲಾಯಿತು. ಬೆಟಗೇರಿಯ ಚನ್ನಬಸಪ್ಪ ಹಿಂಡಿ, ತಿಪ್ಪಣ್ಣ ಅಳಗೋಡಿ, ಶಿಗ್ಲಿಯ ಅಶೋಕ ಕರ್ಪಡೆ, ಲಕ್ಕುಂಡಿಯ ಜಂಬುಸಾಬ್ ಹುನಗುಂದ ಸೇರಿದಂತೆ ಬೆಟಗೇರಿ, ಶಿಗ್ಲಿ, ನರಸಾಪುರ ಹಾಗೂ ಲಕ್ಕುಂಡಿಯ ನೇಕಾರರನ್ನು ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಮಾಧುಸಾ ಮೇಹರವಾಡೆ, ರಾಜು ದಡಿ, ಶಂಕರ ಕಾಕಿ, ರಮೇಶ್ ಹತ್ತಿಕಾಳ, ಬಸವರಾಜ ಕರಿ, ಪ್ರಕಾಶ ಹಿಂಡಿ, ಕೃಷ್ಣ ಕೊಪ್ಪದ, ಮಲ್ಲಿಕರ್ಜುನ ಗಡಗಿನ, ಕಾಶಿನಾಥ ಹೊಸಮನಿ, ಸೋಮ ಮೆಹರವಾಡೆ, ನಾರಾಯಣಪ್ಪ ಕೋಣೆ ಸೇರಿದಂತೆ ನೇಕಾರರು ಉಪಸ್ಥಿತರಿದ್ದರು.

### ಜಿಲ್ಲಾಮಟ್ಟದ ಜಂತುಹುಳು ನಿವಾರಣಾ ದಿನಾಚರಣೆ

# ಜಂತುಹುಳು ಮುಕ್ತ ಮಗು ಆರೋಗ್ಯವಂತ ಮಗು



**ವಿಜಯಸಾಕ್ಷಿ ಸುದ್ದಿ, ಗದಗ**

ಜಂತುಹುಳು ಸೋಂಕಿನಿಂದ ಮಕ್ಕಳಲ್ಲಿ ಪೌಷ್ಟಿಕಾಂಶದ ಕೊರತೆ, ರಕ್ತಹೀನತೆ ಹಾಗೂ ದೈಹಿಕ ಮತ್ತು ಮಾನಸಿಕ ಬೆಳವಣಿಗೆ ಕುಂಠಿತವಾಗುವ ಸಮಸ್ಯೆಗಳು ಕಾಣಿಸಿಕೊಳ್ಳುತ್ತವೆ. ಹೀಗಾಗಿ ೧ರಿಂದ ೧೯ ವರ್ಷದೊಳಗಿನ ಎಲ್ಲ ಮಕ್ಕಳು ಜಂತುಹುಳು ನಿವಾರಣಾ ಮಾತ್ರೆ ಸೇವಿಸುವ ಮೂಲಕ ಸೋಂಕಿನಿಂದ ಮುಕ್ತರಾಗಬೇಕು ಎಂದು ಜಿಲ್ಲಾ ಆರ್‌ಸಿಎಚ್ ಅಧಿಕಾರಿ ಡಾ. ಕೆ.ಎಸ್. ಮೀನಾಕ್ಷಿ ಹೇಳಿದರು.

ಬೆಟಗೇರಿಯ ಸೇಂಟ್ ಜಾನ್ಸ್ ಹಿರಿಯ ಪ್ರಾಥಮಿಕ ಹಾಗೂ ಪ್ರೌಢಶಾಲೆಯಲ್ಲಿ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯಿತಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಆರ್‌ಸಿಎಚ್ ಕಚೇರಿ, ಗದಗ ತಾಲೂಕು ಆರೋಗ್ಯಾಧಿಕಾರಿ ಕಚೇರಿ, ಬೆಟಗೇರಿ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಸೇಂಟ್ ಜಾನ್ಸ್ ಶಿಕ್ಷಣ ಸಂಸ್ಥೆಯ ಸಹಯೋಗದಲ್ಲಿ ನಡೆದ ಜಿಲ್ಲಾಮಟ್ಟದ ರಾಷ್ಟ್ರೀಯ ಜಂತುಹುಳು ನಿವಾರಣಾ ದಿನಾಚರಣೆ ಉದ್ಘಾಟಿಸಿ ಅವರು ಮಾತನಾಡಿದರು.

ಜಂತುಹುಳುಗಳು ಮಕ್ಕಳ ದೇಹದಲ್ಲಿನ ಆಹಾರ ಹಾಗೂ ರಕ್ತದ ಪೌಷ್ಟಿಕಾಂಶವನ್ನು ಹೀರಿಕೊಳ್ಳುವುದರಿಂದ ವಿವಿಧ ಆರೋಗ್ಯ ಸಮಸ್ಯೆಗಳು ಉಂಟಾಗುತ್ತವೆ. ಸೋಂಕಿನ ಲಕ್ಷಣಗಳನ್ನು ಅರಿತು, ನಿಗದಿತ ಅವಧಿಯಲ್ಲಿ ಜಂತುಹುಳು ನಿವಾರಣಾ ಮಾತ್ರೆ ಸೇವಿಸುವುದು ಅಗತ್ಯ ಎಂದರು.

ತಾಲೂಕು ಆರೋಗ್ಯಾಧಿಕಾರಿ ಡಾ. ಪ್ರೀತ್ ಖೋನಾ ಮಾತನಾಡಿ, ವೈಯಕ್ತಿಕ ಸ್ವಚ್ಛತೆ ಕಾಪಾಡುವುದು, ಶುದ್ಧ ನೀರು ಸೇವಿಸುವುದು ಹಾಗೂ ಆರೋಗ್ಯಕರ ಜೀವನಶೈಲಿ ರೂಢಿಸಿಕೊಳ್ಳುವುದರಿಂದ ಜಂತುಹುಳು ಸೋಂಕಿನಿಂದ ದೂರವಿರಬಹುದು ಎಂದರು.

ತಾಲೂಕು ಆರೋಗ್ಯ ಶಿಕ್ಷಣಾಧಿಕಾರಿ ಡಾ. ರಾಜೇಂದ್ರ ಎಸ್. ಗಡಾದ ಪ್ರಾಸ್ತಾವಿಕವಾಗಿ ಮಾತನಾಡಿ, ಮಕ್ಕಳಲ್ಲಿ ಕರುಳಿನ ಜಂತುಹುಳು ಸೋಂಕು ನಿಯಂತ್ರಿಸುವುದು, ರಕ್ತಹೀನತೆ ಹಾಗೂ ಅಪೌಷ್ಟಿಕತೆ ಕಡಿಮೆ ಮಾಡುವುದು ಮತ್ತು ಮಕ್ಕಳ ದೈಹಿಕ-ಮಾನಸಿಕ ಬೆಳವಣಿಗೆಗೆ ನೆರವಾಗುವುದು ಜಂತುಹುಳು ನಿವಾರಣಾ ದಿನಾಚರಣೆಯ ಪ್ರಮುಖ ಉದ್ದೇಶವಾಗಿದೆ ಎಂದರು.

ಸೇಂಟ್ ಜಾನ್ಸ್ ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ಫಾದರ್ ರಾಜಪ್ಪ ಅಧ್ಯಕ್ಷತೆ ವಹಿಸಿದ್ದರು. ಮುಖ್ಯೋಪಾಧ್ಯಾಯೆ ಮೇರಿ ಮಸ್ಕರೇನಸ್, ಬೆಟಗೇರಿ ನಗರ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಮಧುಮತಿ ಪಂಚಮುಖಿ ಸೇರಿದಂತೆ ಆರೋಗ್ಯ ಇಲಾಖೆ ಸಿಬ್ಬಂದಿ, ಆಶಾ ಕಾರ್ಯಕರ್ತೆಯರು, ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಕಾರ್ಯಕ್ರಮದ ಬಳಿಕ ಮಕ್ಕಳಿಗೆ ಜಂತುಹುಳು ನಿವಾರಣಾ ಮಾತ್ರೆಗಳನ್ನು ವಿತರಿಸಲಾಯಿತು.

### ೩೪೮ ವಸತಿರಹಿತ ಕುಟುಂಬಗಳಿಗೆ ಮನೆ: ನಗರಸಭೆ ಪೌರಾಯುಕ್ತ ರಾಜಾರಾಮ ಪವಾರ

# ಸ್ಲಂ ಪ್ರದೇಶಗಳ ಅಭಿವೃದ್ಧಿಗೆ ಪ್ರತ್ಯೇಕ ಅನುದಾನ

**ವಿಜಯಸಾಕ್ಷಿ ಸುದ್ದಿ, ಗದಗ**



ಸ್ಲಂ ಪ್ರದೇಶಗಳ ಮೂಲಸೌಕರ್ಯ ಅಭಿವೃದ್ಧಿಗೆ ನಗರಸಭೆ ಬಜೆಟ್‌ನಲ್ಲಿ ಪ್ರತ್ಯೇಕ ಅನುದಾನ ಮೀಸಲಿಡಲು ಕ್ರಮ ಕೈಗೊಳ್ಳಲಾಗುವುದು. ೩೪೮ ವಸತಿರಹಿತ ಕುಟುಂಬಗಳಿಗೆ ಮನೆ ಒದಗಿಸುವ ಬಗ್ಗೆಯೂ ಆದ್ಯತೆಯಿಂದ ಕ್ರಮ ವಹಿಸಲಾಗುವುದು.
— **ರಾಜಾರಾಮ ಎಸ್. ಪವಾರ,** ಪೌರಾಯುಕ್ತ, ಗದಗ-ಬೆಟಗೇರಿ ನಗರಸಭೆ

ಗದಗ-ಬೆಟಗೇರಿ ನಗರದ ಘೋಷಿತ ಹಾಗೂ ಅಘೋಷಿತ ಸ್ಲಂ ಪ್ರದೇಶಗಳ ಅಭಿವೃದ್ಧಿಗೆ ನಗರಸಭೆಯ ಬಜೆಟ್‌ನಲ್ಲಿ ಪ್ರತ್ಯೇಕ ಅನುದಾನ ಮೀಸಲಿಡಲು ಕ್ರಮ ಕೈಗೊಳ್ಳಲಾಗುವುದು ಎಂದು ನಗರಸಭೆ ಪೌರಾಯುಕ್ತ ರಾಜಾರಾಮ ಎಸ್. ಪವಾರ ಹೇಳಿದರು.

ನಗರಸಭೆಯಲ್ಲಿ ಸ್ಲಂ ಪ್ರದೇಶಗಳ ಸಮಸ್ಯೆ ಹಾಗೂ ಅಭಿವೃದ್ಧಿ ಕುರಿತು ಸ್ಲಂ ಸಮಿತಿ ಮುಖಂಡರೊಂದಿಗೆ ನಡೆದ ಕುಂದು-ಕೊರತೆ ಸಭೆಯಲ್ಲಿ ಅವರು ಮಾತನಾಡಿದರು.

ನಗರದ ಸ್ಲಂ ಪ್ರದೇಶಗಳಲ್ಲಿ ಕುಡಿಯುವ ನೀರು, ರಸ್ತೆ, ಯುಜಿಡಿ, ಶೌಚಾಲಯ ಸೇರಿದಂತೆ ಹಲವು ಮೂಲಸೌಕರ್ಯಗಳ ಕೊರತೆಯಿದೆ. ಸ್ಲಂ ಸಮಿತಿ ಸಲ್ಲಿಸಿರುವ ಹಕ್ಕೊತ್ತಾಯಗಳನ್ನು ಹಂತ ಹಂತವಾಗಿ ಪರಿಗಣಿಸಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದರು.

ವಸತಿರಹಿತರ ಬೇಡಿಕೆ ಕುರಿತು ಈಗಾಗಲೇ ನಗರಸಭೆಯಿಂದ ೩೪೮ ಕುಟುಂಬಗಳ ಸಮೀಕ್ಷೆ ನಡೆಸಲಾಗಿದೆ. ಶೀಘ್ರ ಮನೆಗಳ ವಿತರಣೆಗೆ ಸ್ಥಳೀಯ ಶಾಸಕರೊಂದಿಗೆ ಚರ್ಚಿಸಲಾಗುವುದು. ಸ್ಲಂ ಪ್ರದೇಶಗಳಲ್ಲಿ ಬಯಲು ಶೌಚಕ್ಕೆ ಕಡಿವಾಣ ಹಾಕಲು ಸ್ವಚ್ಛ ಭಾರತ ಯೋಜನೆಯಡಿ ಸಮೀಕ್ಷೆ ನಡೆಸಿ ಮನೆಗೊಂದು ಪ್ರತ್ಯೇಕ ಶೌಚಾಲಯ ಕಲ್ಪಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು. ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯಿಂದ ಹಕ್ಕುಪತ್ರ ಪಡೆದು ನೋಂದಣಿ ಮಾಡಿಕೊಂಡಿರುವ ಕುಟುಂಬಗಳಿಗೆ ಫಾರ್ಮ್ ನಂ.೩ ನೀಡುವಂತೆ ಕಂದಾಯ ಇಲಾಖೆ ಅಧಿಕಾರಿಗಳಿಗೆ ಸೂಚಿಸಲಾಗುವುದು ಎಂದು ಭರವಸೆ ನೀಡಿದರು.

ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ್ ಆರ್. ಮಾನ್ವಿ ಮಾತನಾಡಿ, ನಗರಸಭೆಗೆ ಸ್ಲಂ ಸೆಸ್ ಪಾವತಿಯಾಗುತ್ತಿದ್ದರೂ, ಸ್ಲಂ ಪ್ರದೇಶಗಳ ಅಭಿವೃದ್ಧಿಗೆ ಸರ್ಮಕ ಅನುದಾನ ಬಳಕೆಯಾಗುತ್ತಿಲ್ಲ.

ವಸತಿರಹಿತರಿಗಾಗಿ ಕಳೆದ ೧೪ ವರ್ಷಗಳಿಂದ ಹೋರಾಟ ನಡೆಸಲಾಗುತ್ತಿದೆ. ನಗರಸಭೆ ನಡೆಸಿದ ಸಮೀಕ್ಷೆಯಲ್ಲಿ ಗುರುತಿಸಿರುವ ೩೪೮ ವಸತಿರಹಿತ ಕುಟುಂಬ ಗಳಿಗೆ ಕೂಡಲೇ ಮನೆಗಳನ್ನು ಹಂಚಿಕೆ ಮಾಡಬೇಕು ಎಂದು ಒತ್ತಾಯಿಸಿದರು.

ಸಮಿತಿ ಉಪಾಧ್ಯಕ್ಷ ಅಶೋಕ ಕುಡತಿನ್ನಿ ಮಾತನಾಡಿ, ಪ್ರತಿ ವರ್ಷ ಬಜೆಟ್ ಪೂರ್ವಭಾವಿ ಸಭೆಯಲ್ಲಿ ಸ್ಲಂ ಪ್ರದೇಶಗಳ ಅಭಿವೃದ್ಧಿಗೆ ಪ್ರತ್ಯೇಕ ಅನುದಾನ ಮೀಸಲಿಡುವಂತೆ ಮನವಿ ಮಾಡಲಾಗುತ್ತಿದೆ. ಈ ಬಾರಿ ಬೇಡಿಕೆಗೆ ಆದ್ಯತೆ ನೀಡಿ ಅನುದಾನ ಮೀಸಲಿಡಬೇಕು ಎಂದು ಆಗ್ರಹಿಸಿದರು.

ಸಭೆಯಲ್ಲಿ ನಗರಸಭೆಯ ಸಹಾಯಕ ಕಾರ್ಯಪಾಲಕ ಅಭಿಯಂತರ ಲಕ್ಷ್ಮಣ ಎಂ. ಜೋಗದಂಡಕರ, ಪರಿಸರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಆನಂದ ಬದಿ, ಕಂದಾಯ ಹಾಗೂ ಆಶ್ರಯ ಸಮಿತಿ ವಿಭಾಗದ ಸಿಬ್ಬಂದಿ, ಲೆಕ್ಕಾಧೀಕ್ಷಕರ ವಿಭಾಗದ ಅಧಿಕಾರಿಗಳು, ಸ್ಲಂ ಸಮಿತಿ ಕಾರ್ಯದರ್ಶಿ ಅಶೋಕ ಕುಸಬಿ, ಮುಖಂಡರಾದ ಪುಷ್ಪಾ ಬಿಜಾಪೂರ, ಇಬ್ರಾಹಿಂ ಮುಲ್ಲಾ, ಮೌಲಾಸಾಬ ಗಚ್ಚಿ, ಶರಣಪ್ಪ ಸೂಡಿ, ಮೆಹಬೂಬಸಾಬ ಬಳ್ಳಾರಿ, ಸಲೀಂ ಹರಿಹರ, ಖಾಜಾಸಾಬ ಇಸ್ಮಾಯಿಲನವರ, ಹುಸೇನ ಮುಲ್ಲಾನವರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಮೂಲಸೌಕರ್ಯ ಕೊರತೆ, ೭ ದಿನವಾದರೂ ಕ್ರಮವಾಗಿಲ್ಲ ಎಂದು ಗ್ರಾಮಸ್ಥರ ಆಕ್ರೋಶ

# ಗ್ರಾಪಂ ಆಡಳಿತಾಧಿಕಾರಿ ಬದಲಾವಣೆಗೆ ಧರಣಿ



**ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಐತಿಹಾಸಿಕ ಲಕ್ಕುಂಡಿ ಗ್ರಾಮದ ಮೂಲಭೂತ ಸೌಲಭ್ಯಗಳ ನಿರ್ವಹಣೆಯಲ್ಲಿ ಆಡಳಿತಾಧಿಕಾರಿಗಳು ವಿಫಲರಾಗಿದ್ದಾರೆ ಎಂದು ಆರೋಪಿಸಿ, ಅವರನ್ನು ಬದಲಾವಣೆ ಮಾಡಬೇಕು ಎಂದು ಆಗ್ರಹಿಸಿ ಗ್ರಾಮಸ್ಥರು ಗ್ರಾಮ ಪಂಚಾಯಿತಿ ಕಚೇರಿ ಎದುರು ಧರಣಿ ಸತ್ಯಾಗ್ರಹ ನಡೆಸಿದರು.

ತಾಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ಎಂ.ಎನ್. ಉಮಚಗಿ, ಮಾಜಿ ಸದಸ್ಯ ಮಹೇಶ ಮುಸ್ಕಿನಭಾವಿ, ನಜೀರಅಹ್ಮದ್ ಕಿರಿಟಗೇರಿ, ಗ್ರಾಪಂ ಮಾಜಿ ಸದಸ್ಯ ಬಿ.ಬಿ. ಮಾಡಲಗೇರಿ ಹಾಗೂ ಶಿವಪ್ಪ ಸಜ್ಜನರ ನೇತೃತ್ವದಲ್ಲಿ ಬೆಳಿಗ್ಗೆ ೧೧ರಿಂದ ಸಂಜೆ ೪ರವರೆಗೆ ಪ್ರತಿಭಟನೆ ನಡೆಯಿತು.

ಗ್ರಾಮದಲ್ಲಿ ಸರ್ಮಕ ಕುಡಿಯುವ ನೀರು ಪೂರೈಕೆಯಾಗುತ್ತಿಲ್ಲ. ರಸ್ತೆಗಳ ಸ್ವಚ್ಛತೆ, ಸಾರ್ವಜನಿಕ ವಿದ್ಯುತ್ ವ್ಯವಸ್ಥೆ ಸೇರಿದಂತೆ ಹಲವು ಮೂಲಸೌಕರ್ಯಗಳ ಸಮಸ್ಯೆ ಇದೆ. ಪಂಚಾಯಿತಿ ಸಿಬ್ಬಂದಿಗೆ ವೇತನ ವಿಳಂಬವಾಗುತ್ತಿದ್ದು, ಸಿಬ್ಬಂದಿಯ ಕಾರ್ಯವೈಖರಿಯ ಮೇಲೂ ಸರ್ಮಕ ಹಿಡಿತವಿಲ್ಲ.

ಸಾರ್ವಜನಿಕರಿಗೆ ಸಮಯಕ್ಕೆ ಸರಿಯಾಗಿ ಸೇವೆ ದೊರೆಯುತ್ತಿಲ್ಲ ಎಂದು ಪ್ರತಿಭಟನಾಕಾರರು ಆರೋಪಿಸಿದರು.

ಸಾರ್ವಜನಿಕರೊಂದಿಗೆ ಅಸಭ್ಯವಾಗಿ ವರ್ತಿಸುತ್ತಾರೆ ಎನ್ನಲಾದ ವಾಲ್ಮನ್ ವಿರುದ್ಧ ಕ್ರಮ ಕೈಗೊಳ್ಳಲು ಆಡಳಿತಾಧಿಕಾರಿಗಳು ಹಿಂದೇಟು ಹಾಕುತ್ತಿದ್ದಾರೆ ಎಂದು ದೂರಿದರು.

ಆಡಳಿತಾಧಿಕಾರಿಯನ್ನು ಬದಲಾವಣೆ ಮಾಡುವಂತೆ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿ ಏಳು ದಿನ ಕಳೆದರೂ ಯಾವುದೇ ಕ್ರಮವಾಗದ ಹಿನ್ನೆಲೆಯಲ್ಲಿ ಪ್ರತಿಭಟನೆ ನಡೆಸಲಾಗಿದೆ ಎಂದು ಹೇಳಿದರು.

ಈ ನಡುವೆ ಕುಡಿಯುವ ನೀರು ಹಾಗೂ ಸ್ವಚ್ಛತೆ ಸಮಸ್ಯೆ ಕುರಿತು ಆಡಳಿತಾಧಿಕಾರಿ ಶರಣು ಗೋಗೇರಿ ಹಾಗೂ ಪಿಡಿಒ ಅಮೀರನಾಯಕ ಅವರೊಂದಿಗೆ ಪ್ರತಿಭಟನಾಕಾರರು ವಾಗ್ವಾದ ನಡೆಸಿದರು. ಸಮಸ್ಯೆಗಳನ್ನು ಈಗಾಗಲೇ ಸಿಬ್ಬಂದಿಯೊಂದಿಗೆ ಚರ್ಚಿಸಲಾಗಿದ್ದು, ಮುಂದಿನ ದಿನಗಳಲ್ಲಿ ಮೂಲಭೂತ ಸೌಲಭ್ಯಗಳನ್ನು ಸರ್ಮಕವಾಗಿ ಒದಗಿಸಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು. ಪ್ರತಿಭಟನೆ ಕೈಬಿಡುವಂತೆ ಅಧಿಕಾರಿಗಳು ಮನವಿ ಮಾಡಿದರು.

ಆದರೆ ತಾಲೂಕು ಪಂಚಾಯಿತಿ ಅಧಿಕಾರಿಗಳು ಸ್ಥಳಕ್ಕೆ ಆಗಮಿಸಿ ಸ್ಪಷ್ಟ ಭರವಸೆ ನೀಡುವವರೆಗೂ ಪ್ರತಿಭಟನೆ ಹಿಂಪಡೆಯುವುದಿಲ್ಲ ಎಂದು ಗ್ರಾಮಸ್ಥರು ಪಟ್ಟು ಹಿಡಿದರು. ಬಳಿಕ ವಿಬಿಜಿ ರಾಮ್‌ಜಿ ಯೋಜನೆಯ ಸಹಾಯಕ ನಿರ್ದೇಶಕ ಕುಮಾರ ಪೂಜಾರ ಸ್ಥಳಕ್ಕೆ ಆಗಮಿಸಿ, ಗ್ರಾಮಸ್ಥರ ಮನವಿಯನ್ನು ಅಧಿಕಾರಿಗಳು ಪರಿಶೀಲಿಸಿದ್ದು, ಜಿಲ್ಲಾಧಿಕಾರಿಗಳು ಆಡಳಿತಾಧಿಕಾರಿ ಬದಲಾವಣೆ ಕುರಿತು ಕ್ರಮ ಕೈಗೊಳ್ಳಲಿದ್ದಾರೆ. ಈ ಹಿನ್ನೆಲೆಯಲ್ಲಿ ಪ್ರತಿಭಟನೆ ಹಿಂಪಡೆಯುವಂತೆ ಮನವಿ ಮಾಡಿದರು.

ಇದಕ್ಕೆ ಸ್ಪಂದಿಸಿದ ಪ್ರತಿಭಟನಾಕಾರರು, ಆಡಳಿತಾಧಿಕಾರಿ ಬದಲಾವಣೆಯ ಆದೇಶ ಹೊರಬರದಿದ್ದರೆ ಮತ್ತೆ ಪ್ರತಿಭಟನೆ ನಡೆಸುವುದಾಗಿ ಎಚ್ಚರಿಕೆ ನೀಡಿ ಧರಣಿ ಹಿಂಪಡೆದರು.

ಪ್ರತಿಭಟನೆಯಲ್ಲಿ ಅಶೋಕ ಮೇಟಿ, ಬಸವರಾಜ ಮುಳ್ಳಾಳ, ಬಸವರಾಜ ಕವಲೂರು, ಅಶೋಕ ಗದಗಿನ, ಪ್ರವೀಣ ಕಲಾಲ, ವಿನಾಯಕ ಡಿಗ್ಗಾವಿ, ಚಂದ್ರು ಚಬ್ಬರಭಾವಿ, ಪ್ರಶಾಂತ ಬಟ್ಟೂರ, ವೀರಣ್ಣ ಅರಹುಣಶಿ, ಮಲ್ಲಿಕರ್ಜುನ ರಾಯಚೂರು, ನಾಗರಾಜ ಜಾಡರ, ಮಹಮ್ಮದ್ ರಫೀಕ್ ಬೆಟಗೇರಿ, ರವಿ ಕವಲೂರು, ಕಲ್ಮೇಶ ಅಂಬಕ್ಕಿ ಸೇರಿದಂತೆ ಗ್ರಾಮಸ್ಥರು ಪಾಲ್ಗೊಂಡಿದ್ದರು.

### ಅಂಬಿಗರ ಚೌಡಯ್ಯ ಸಮಾಜ ಟ್ರಸ್ಟ್‌ನಿಂದ ಪುಸ್ತಕ ವಿತರಣೆ

# ಶಿಕ್ಷಣವೇ ಬಡತನ ಗೆಲ್ಲುವ ಅಸ್ತ್ರ

**ವಿಜಯಸಾಕ್ಷಿ ಸುದ್ದಿ, ಗದಗ**

ಬಡತನ ಸೇರಿದಂತೆ ಜೀವನದಲ್ಲಿ ಎದುರಾಗುವ ಯಾವುದೇ ಕಷ್ಟಗಳಿಗೆ ಹೆದರದೆ ಉತ್ತಮ ಶಿಕ್ಷಣ ಪಡೆಯಬೇಕು. ಶಿಕ್ಷಣದ ಮೂಲಕವೇ ಜೀವನದಲ್ಲಿ ಉನ್ನತ ಸಾಧನೆ ಮಾಡಲು ಸಾಧ್ಯ ಎಂದು ಹೊಸಪೇಟೆ ಜಿಲ್ಲಾ ಕಾರಾಗೃಹದ ಅಧೀಕ್ಷಕ ಎಫ್.ಜಿ. ಬಾರಕೇರ ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಗದಗ ಜಿಲ್ಲಾ ಅಂಬಿಗರ ಚೌಡಯ್ಯ ಸಮಾಜ ಟ್ರಸ್ಟ್ ವತಿಯಿಂದ ನಗರದ ಮುಳಗುಂದ ರಸ್ತೆಯ ಸನ್ಮತಿ ಕಾಂಪ್ಲೆಕ್ಸ್‌ನ ಯೂನಿರ್ಸಲ್ ಎಜುಕೇಷನಲ್ ಇನ್‌ಸ್ಟಿಟ್ಯೂಟ್‌ನಲ್ಲಿ ಭಾನುವಾರ ಆಯೋಜಿಸಿದ್ದ ಪುಸ್ತಕ ವಿತರಣೆ ಹಾಗೂ ಸಮಾಜದ ಸಾಧಕರ ಸನ್ಮಾನ ಸಮಾರಂಭದಲ್ಲಿ ಅವರು ಮಾತನಾಡಿದರು.

ತಮ್ಮ ಬಾಲ್ಯದ ಬಡತನದ ನಡುವೆಯೂ ಶಿಕ್ಷಣ ಮುಂದುವರಿಸಿ, ವಿವಿಧ ಹಂತಗಳನ್ನು ದಾಟಿ ಪ್ರಸ್ತುತ ಹುದ್ದೆ ತಲುಪಿದ ಅನುಭವವನ್ನು ವಿದ್ಯಾರ್ಥಿಗಳೊಂದಿಗೆ ಹಂಚಿಕೊಂಡ ಬಾರಕೇರ, ಕಷ್ಟಗಳು ಬಂದರೂ ಶಿಕ್ಷಣದ ಮೇಲಿನ ಆಸಕ್ತಿ ಹಾಗೂ ಪರಿಶ್ರಮವನ್ನು ಕೈಬಿಡಬಾರದು ಎಂದು ಸಲಹೆ ನೀಡಿದರು.

ಮನೋರಮಾ ಕಾಲೇಜಿನ ಪ್ರಾಚಾರ್ಯ ಬಿ.ಎಸ್. ಹಿರೇಮಠ ಅವರು ತಮ್ಮ ಬಾಲ್ಯದ ಬಡತನ ಹಾಗೂ ಶೈಕ್ಷಣಿಕ ದಿನಗಳ ಅನುಭವಗಳನ್ನು ವಿದ್ಯಾರ್ಥಿಗಳೊಂದಿಗೆ ಹಂಚಿಕೊಂಡರು. ಸಮಾಜದ ವಿದ್ಯಾರ್ಥಿಗಳಿಗೆ ಶಿಕ್ಷಣದ ಸಂದರ್ಭದಲ್ಲಿ ಯಾವುದೇ ಸಮಸ್ಯೆ ಎದುರಾದರೂ ತಮ್ಮನ್ನು ಸಂರ್ಪಕಿಸುವಂತೆ ಕಾರ್ಯಕ್ರಮದ ಮುಖ್ಯ ಉಸ್ತುವಾರಿ ಸಂಗಮೇಶ ಹಾದುಮನಿ ತಿಳಿಸಿದರು.

ಸಮಾರಂಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಎಫ್.ಜಿ. ಬಾರಕೇರ, ಶಿಕ್ಷಣ ಕ್ಷೇತ್ರದ ರೇಖಾ ತೇರದಾಳ, ಶೈಲಾ ಹನಮರ, ಗದಗ ಜಿಮ್ಸ್‌ನ ಪ್ರಾಚಾರ್ಯ ರವಿ ಬಾರಕೇರ ಹಾಗೂ ಸಮಾಜ ಸೇವಕ ಮಂಜುನಾಥ ಗುಡಿಸಾಗರ ಅವರನ್ನು ಸನ್ಮಾನಿಸಲಾಯಿತು.

ಇದೇ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ಸಾವಿರಕ್ಕೂ ಹೆಚ್ಚು ಪುಸ್ತಕಗಳನ್ನು ಉಚಿತವಾಗಿ ವಿತರಿಸಲಾಯಿತು. ಸಮಾಜದ ಮುಖಂಡರು, ವಿದ್ಯಾರ್ಥಿಗಳು ಹಾಗೂ ಗಣ್ಯರು ಉಪಸ್ಥಿತರಿದ್ದರು.



### ಬ್ರಹ್ಮಕುಮಾರಿ ವಿಶ್ವವಿದ್ಯಾಲಯದಿಂದ ವ್ಯಸನಮುಕ್ತ ಪ್ರತಿಜ್ಞಾವಿಧಿ ಮಹಾ ಅಭಿಯಾನ

# ವ್ಯಸನಮುಕ್ತ ಬದುಕಿಗೆ ವಿದ್ಯಾರ್ಥಿಗಳಿಂದ ಪ್ರತಿಜ್ಞೆ

**ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**



ವಿದ್ಯಾರ್ಥಿಗಳು ವ್ಯಸನಗಳಿಗೆ ದಾಸರಾಗದೆ ತಮ್ಮ ಆರೋಗ್ಯ, ಬೌದ್ಧಿಕ ಸಾರ್ಥ ಹಾಗೂ ಆಧ್ಯಾತ್ಮಿಕ ಸಂಪತ್ತನ್ನು ಕಾಪಾಡಿಕೊಳ್ಳಬೇಕು ಎಂದು ಪ್ರಜಾಪಿತ ಬ್ರಹ್ಮಕುಮಾರಿ ವಿಶ್ವವಿದ್ಯಾಲಯದ ದೇವಕಿ ಅಕ್ಕ ಕರೆ ನೀಡಿದರು.

ಶಿರಹಟ್ಟಿಯ ಎಫ್.ಎಂ. ಡಬ್ಲ್ಯು. ಕಾಲೇಜಿನಲ್ಲಿ ಸೋಮವಾರ ಪ್ರಜಾಪಿತ ಬ್ರಹ್ಮಕುಮಾರಿ ವಿಶ್ವವಿದ್ಯಾಲಯದ ವತಿಯಿಂದ ಹಮ್ಮಿಕೊಂಡಿದ್ದ ವ್ಯಸನಮುಕ್ತ ಪ್ರತಿಜ್ಞಾವಿಧಿ ಮಹಾ ಅಭಿಯಾನದಲ್ಲಿ ಅವರು ಮಾತನಾಡಿದರು.

ವ್ಯಸನಗಳು ವ್ಯಕ್ತಿಯ ಆರೋಗ್ಯ ಹಾಗೂ ಭವಿಷ್ಯದ ಮೇಲೆ ದುಷ್ಪರಿಣಾಮ ಬೀರುತ್ತವೆ. ಹೀಗಾಗಿ ವಿದ್ಯಾರ್ಥಿಗಳು ವ್ಯಸನಗಳಿಂದ ದೂರವಿದ್ದು, ಆರೋಗ್ಯಕರ ಹಾಗೂ ಶಿಸ್ತಿನ ಜೀವನ ನಡೆಸುವ ಸಂಕಲ್ಪ ಮಾಡಬೇಕು. ಈ ನಿಟ್ಟಿನಲ್ಲಿ ವಿದ್ಯಾರ್ಥಿಗಳಿಗೆ ವ್ಯಸನಮುಕ್ತ ಪ್ರತಿಜ್ಞೆ ಬೋಧಿಸಲಾಯಿತು ಎಂದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಶಿಕ್ಷಣ ಸಮಿತಿಯ ಗೌರವ ಕಾರ್ಯದರ್ಶಿ ಎನ್.ಆರ್. ಕುಲಕರ್ಣಿ, ಪ್ರತಿಯೊಬ್ಬರಿಗೂ ಭಗವಂತ ಅರಿವು ಮತ್ತು ತಿಳುವಳಿಕೆ ನೀಡಿದ್ದಾನೆ. ಅದನ್ನು ಸದುಪಯೋಗಪಡಿಸಿಕೊಂಡು ಉತ್ತಮ ಜೀವನ ನಡೆಸಬೇಕು ಎಂದರು.

ವ್ಯಸನಮುಕ್ತ ಹಾಗೂ ಪ್ಲಾಸ್ಟಿಕ್ ಮುಕ್ತ ಅಭಿಯಾನಗಳನ್ನು ನಡೆಸುತ್ತಿರುವ ಸರ್ಕಾರ, ಮತ್ತೊಂದೆಡೆ ಇಂತಹ ಉತ್ಪನ್ನಗಳ ಕಂಪನಿಗಳಿಗೆ ಪರವಾನಗಿ ನೀಡುತ್ತಿರುವುದು ದ್ವಂದ್ವ ನೀತಿಯಾಗಿದೆ.

ಸರ್ಕಾರವು ವ್ಯಸನಕಾರಿ ವಸ್ತುಗಳ ಉತ್ಪಾದನೆ ಹಾಗೂ ಮಾರಾಟಕ್ಕೆ ಕಡಿವಾಣ ಹಾಕುವ ಮೂಲಕ ಅಭಿಯಾನಕ್ಕೆ ಮತ್ತಷ್ಟು ಬಲ ನೀಡಬೇಕು ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಪ್ರಾಚಾರ್ಯ ಎಂ.ಸಿ. ಭಜಂತ್ರಿ, ಆಡಳಿತಾಧಿಕಾರಿ ಐ.ಬಿ. ಬೆನಕೊಪ್ಪ, ಎಚ್.ಡಿ. ಕೊಡ್ಲಿಯವರ, ಆರ್. ಎಸ್. ಬಟಗರ್ಕಿ, ಎನ್. ಹನುಮರಡ್ಡಿ, ರೇಣುಕಾ ಲಕ್ಕುಂಡಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಮುಳಗುಂದದಲ್ಲಿ ರಾಜ್ಯಮಟ್ಟದ ಮೌಂಟನ್ ಸೈಕ್ಲಿಂಗ್ ಸಮಾರೋಪ

# ಸೈಕ್ಲಿಂಗ್ ರೋಮಾಂಚನ, ಸಾಹಸ ಕ್ರೀಡೆ



**ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಸೈಕ್ಲಿಂಗ್ ಅತ್ಯಂತ ರೋಮಾಂಚನಕಾರಿ ಹಾಗೂ ಸಾಹಸಮಯ ಕ್ರೀಡೆಯಾಗಿದ್ದು, ಇಂತಹ ಕ್ರೀಡೆಗಳಿಂದ ಗ್ರಾಮೀಣ ಭಾಗದ ಮಕ್ಕಳಲ್ಲಿ ಕ್ರೀಡಾಸಕ್ತಿ ಹಾಗೂ ಉತ್ಸಾಹ ಹೆಚ್ಚಲಿದೆ ಎಂದು ವಿಜಯ ನೀಲಗುಂದ ಹೇಳಿದರು.

ಮುಳಗುಂದ ಪಟ್ಟಣದ ಬಾಲಲೀಲಾ ಮಹಾಂತ ಶಿವಯೋಗಿಗಳ ಕಲಾಭವನದಲ್ಲಿ ಕರ್ನಾಟಕ ರಾಜ್ಯ ಹಾಗೂ ಗದಗ ಜಿಲ್ಲಾ ಅಮೆಚೂರ್ ಸೈಕ್ಲಿಂಗ್ ಅಸೋಸಿಯೇಷನ್ ವತಿಯಿಂದ ನಡೆದ ರಾಜ್ಯಮಟ್ಟದ ಮೌಂಟನ್ ಸೈಕ್ಲಿಂಗ್ ಕ್ರೀಡಾಕೂಟದ ಸಮಾರೋಪ ಸಮಾರಂಭದಲ್ಲಿ ವಿಜೇತ ಕ್ರೀಡಾಪಟುಗಳನ್ನು ಸನ್ಮಾನಿಸಿ ಅವರು ಮಾತನಾಡಿದರು.

ಮುಳಗುಂದ ಸುತ್ತಮುತ್ತಲಿನ ಗುಡ್ಡಗಾಡು ಪ್ರದೇಶ ಮೌಂಟನ್ ಸೈಕ್ಲಿಂಗ್‌ಗೆ ಸೂಕ್ತವಾಗಿದ್ದು, ಮುಂದಿನ ದಿನಗಳಲ್ಲಿ ಅಂತರರಾಷ್ಟ್ರೀಯ ಮಟ್ಟದ ಸ್ಪರ್ಧೆಗಳನ್ನು ಆಯೋಜಿಸುವ ಸಾರ್ಥ್ಯ ಹೊಂದಿದೆ. ರಾಜ್ಯದ ವಿವಿಧ ಜಿಲ್ಲೆಗಳಿಂದ ಆಗಮಿಸಿದ್ದ ಕ್ರೀಡಾಪಟುಗಳ ಸಾಹಸಮಯ ಸೈಕ್ಲಿಂಗ್ ವೀಕ್ಷಿಸುವುದೇ ರೋಮಾಂಚನಕಾರಿ ಅನುಭವವಾಗಿತ್ತು.

ಕ್ರೀಡೆಯಲ್ಲಿ ಸೋಲು-ಗೆಲುವಿಗಿಂತ ಭಾಗವಹಿಸುವಿಕೆ ಮುಖ್ಯ ಎಂದು ಹೇಳಿದರು. ಮಹಾಂತೇಶ ದನ್ನೂರ ಮಾತನಾಡಿ, ಉತ್ತರ ಕರ್ನಾಟಕದಲ್ಲಿ ರೋಡ್ ಸೈಕ್ಲಿಂಗ್ ನಲ್ಲಿ ಉತ್ತಮ ಕ್ರೀಡಾಪಟುಗಳು ಹೊರಹೊಮ್ಮುತ್ತಿದ್ದರೆ, ಮೈಸೂರು ಹಾಗೂ ಬೆಂಗಳೂರು ಭಾಗಗಳಲ್ಲಿ ಮೌಂಟನ್ ಸೈಕ್ಲಿಂಗ್‌ಗೆ ಹೆಚ್ಚಿನ ಪ್ರೋತ್ಸಾಹವಿದೆ. ಮುಳಗುಂದದಲ್ಲಿ ಕ್ರೀಡೆ ಹಾಗೂ ಕ್ರೀಡಾಪಟುಗಳಿಗೆ ಉತ್ತಮ ಸಹಕಾರ ದೊರೆಯುತ್ತಿದೆ ಎಂದರು.

ಕ್ರೀಡಾಕೂಟದಲ್ಲಿ ರಾಜ್ಯದ ೧೬ ಜಿಲ್ಲೆಗಳಿಂದ ೧೮೦ ಸೈಕ್ಲಿಂಗ್ ಕ್ರೀಡಾಪಟುಗಳು ಭಾಗವಹಿಸಿದ್ದರು. ವಿವಿಧ ವಿಭಾಗಗಳಲ್ಲಿ ಪ್ರಥಮ, ದ್ವಿತೀಯ ಹಾಗೂ ತೃತೀಯ ಸ್ಥಾನ ಪಡೆದ ಕ್ರೀಡಾಪಟುಗಳನ್ನು ಸನ್ಮಾನಿಸಿ ಗೌರವಿಸಲಾಯಿತು.

ಗದಗ ಜಿಲ್ಲಾ ಸೈಕ್ಲಿಂಗ್ ಅಸೋಸಿಯೇಷನ್ ಅಧ್ಯಕ್ಷ ಶಿವಪುತ್ರಪ್ಪ ಕಣವಿ, ಬಿ.ವಿ. ಸುಂಕಾಪೂರ, ರಾಮಣ್ಣ ಕಮಾಜಿ, ಎಂ.ಡಿ. ಬಟ್ಟೂರ, ಡಾ. ಎಸ್.ಸಿ. ಚವಡಿ, ಸಂಜಯ ನೀಲಗುಂದ, ಶಿವಬಸವ ಹಸಬಿ, ವಿ.ಡಿ. ಕಣವಿ, ಕಣಕಿ ಸೇರಿದಂತೆ ಅಸೋಸಿಯೇಷನ್‌ನ ಪದಾಧಿಕಾರಿಗಳು ಹಾಗೂ ಸದಸ್ಯರು ಉಪಸ್ಥಿತರಿದ್ದರು.

# ಅಂಬೇಡ್ಕರ್-ಗಾಂಧೀಜಿ ಭಾವಚಿತ್ರ ಅಳವಡಿಸದ ಆರೋಪ: ಕ್ರಮಕ್ಕೆ ಆಗ್ರಹಿಸಿ ಮನವಿ

**ವಿಜಯಸಾಕ್ಷಿ ಸುದ್ದಿ, ಗದಗ**

ಮುಳಗುಂದ ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಹಾಗೂ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಭಾವಚಿತ್ರಗಳನ್ನು ಅಳವಡಿಸಿಲ್ಲ ಎಂದು ಆರೋಪಿಸಿ, ಜೈ ಭೀಮ ರಾಜ್ಯ ಸಂಘರ್ಷ ಸಮಿತಿಯ ಗದಗ ಜಿಲ್ಲಾ ಘಟಕವು ಆಕ್ಷೇಪ ವ್ಯಕ್ತಪಡಿಸಿದೆ. ಈ ಕುರಿತು ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರಿಗೆ ಕ್ರಮ ಕೈಗೊಳ್ಳುವಂತೆ ಗದಗ ಜಿಲ್ಲಾಧಿಕಾರಿಗಳ ಮೂಲಕ ಮನವಿ ಸಲ್ಲಿಸಲಾಯಿತು. ಸಮಿತಿಯ ಜಿಲ್ಲಾಧ್ಯಕ್ಷ ಗಣೇಶ ವೈ. ಹುಬ್ಬಳ್ಳಿ ಮಾತನಾಡಿ, ಕಾಲೇಜಿನಲ್ಲಿ ಗಾಂಧೀಜಿ ಹಾಗೂ ಡಾ. ಅಂಬೇಡ್ಕರ್ ಅವರ ಭಾವಚಿತ್ರಗಳನ್ನು ಅಳವಡಿಸದಿರುವುದು ಖಂಡನೀಯ. ಈ ಕುರಿತು ಸ್ಥಳೀಯ ದಲಿತ ಯುವ ಮುಖಂಡರು ಎರಡು ತಿಂಗಳ ಹಿಂದೆಯೇ ಕಾಲೇಜಿನ ಪ್ರಭಾರಿ ಪ್ರಾಚರ್ಯೆ ಮಂಜುಳಾದೇವಿ ಹಕ್ಕಂಡಿ ಅವರ ಗಮನಕ್ಕೆ ತಂದಿದ್ದರೂ, ಇದುವರೆಗೆ ಕ್ರಮ ಕೈಗೊಂಡಿಲ್ಲ ಎಂದು ಆರೋಪಿಸಿದರು.

ಸರ್ಕಾರದ ಆದೇಶದಂತೆ ಸರ್ಕಾರಿ ಶಾಲೆ, ಕಾಲೇಜು ಹಾಗೂ ಕಚೇರಿಗಳಲ್ಲಿ ಮಹನೀಯರ ಭಾವಚಿತ್ರಗಳನ್ನು ಅಳವಡಿಸುವುದು ಅಗತ್ಯವಾಗಿದ್ದರೂ, ಕಾಲೇಜಿನ ಆಡಳಿತದ ನಿರ್ಲಕ್ಷ್ಯದಿಂದ ಈ ಪರಿಸ್ಥಿತಿ ಉಂಟಾಗಿದೆ ಎಂದು ದೂರಿದರು. ಕೂಡಲೇ ವಿಚಾರಣೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು. ಅಗತ್ಯವಿದ್ದರೆ ಪ್ರಾಚಾರ್ಯರನ್ನು ಅಮಾನತುಗೊಳಿಸಬೇಕು ಎಂದು ಒತ್ತಾಯಿಸಿದರು. ಈ ಕುರಿತು ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರಿಗೂ ಮನವಿ ಸಲ್ಲಿಸಲಾಯಿತು. ಮನವಿ ಸಲ್ಲಿಸುವ ಸಂದರ್ಭದಲ್ಲಿ ದಲಿತ ಮುಖಂಡ ಶರೀಫ ಬಿಳೆಯಲಿ, ಡಿಎಸ್‌ಎಸ್ ಮುಖಂಡ ಬಾಲರಾಜ ಅರಬರ, ಛಲವಾದಿ ಮಹಾಸಭಾ ಅಧ್ಯಕ್ಷ ಆನಂದ ಸಿಂಗಾಡಿ, ಕರ್ನಾಟಕ ಮಾದಿಗ ಸಂಘರ್ಷ ಸಮಿತಿ ಜಿಲ್ಲಾಧ್ಯಕ್ಷ ರಾಘವೇಂದ್ರ ಪಿ. ಪರಾಪೂರ, ಪ್ರಜಾಶಕ್ತಿ ಸಮಿತಿ ಜಿಲ್ಲಾಧ್ಯಕ್ಷ ಡಾ. ದಾದಾಪೀರ ಕಲೆಗಾರ, ಪವನ ಸವದಿ, ಜೈ ಭೀಮ ರಾಜ್ಯ ಸಂಘರ್ಷ ಸಮಿತಿ ಉಪಾಧ್ಯಕ್ಷ ಮಂಜುನಾಥ ಎಫ್. ತೌಜಲ್, ರೋಣ ತಾಲೂಕು ಅಧ್ಯಕ್ಷ ಬಸವರಾಜ ಬದಾಮಿ ಸೇರಿದಂತೆ ವಿವಿಧ ಸಂಘಟನೆಗಳ ಮುಖಂಡರು ಹಾಗೂ ಪದಾಧಿಕಾರಿಗಳು ಉಪಸ್ಥಿತರಿದ್ದರು.